**All India Radio: Bangalore**
**National Bulletin In Kannada**
**04.03.2025  13.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**04.03.2025  13.10 p.m.**

**<><><><>**

ಮುಖ್ಯಾಂಶಗಳು

1. ಕೇಂದ್ರದ ಬಜೆಟ್ ನಂತರದ ಎಂಎಸ್ಎಂಇ ವಲಯ ಕುರಿತ  ವೆಬಿನಾರ್‌ಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ: ತಯಾರಿಕೆ ಮತ್ತು ರಫ್ತು ವಲಯದ ಉತ್ತೇಜನಕ್ಕೆ ಬಜೆಟ್‌ನಲ್ಲಿ ಹಲವು ಕ್ರಮ
2. ಎಲ್ಲಾ ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳ ಸಮಾವೇಶ ದೆಹಲಿಯಲ್ಲಿಂದು ಆರಂಭ
3. ಅಮೆರಿಕಾಕ್ಕೆ ರಫ್ತಾಗುವ ಚೀನಾ, ಕೆನಡಾ, ಮೆಕ್ಸಿಕೊ ಉತ್ಪನ್ನಗಳ ಮೇಲೆ ಹೆಚ್ಚಿನ ತೆರಿಗೆ ವಿಧಿಸುವ ಪ್ರಕ್ರಿಯೆ ಇಂದಿನಿಂದ ಜಾರಿಗೆ
4. ಐಸಿಸಿ ಚಾಂಪಿಯನ್ಸ್ ಟ್ರೋಫಿ ಪುರುಷರ ಕ್ರಿಕೆಟ್: ಮೊದಲ ಸೆಮಿಫೈನಲ್‌ನಲ್ಲಿ ಭಾರತ-ಆಸ್ಟ್ರೇಲಿಯಾ ಮುಖಾಮುಖಿ

<><><><>

ದೇಶದಲ್ಲಿ ತಯಾರಿಕೆ ಮತ್ತು ರಫ್ತು ವಲಯಕ್ಕೆ ಹೆಚ್ಚಿನ ಒತ್ತು ನೀಡಲು ಕೇಂದ್ರ ಸರ್ಕಾರ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಈ ನಿಟ್ಟಿನಲ್ಲಿ ರೂಪಿಸಲಾದ ಕೇಂದ್ರದ ಬಜೆಟ್‌ನಲ್ಲಿ ಎಲ್ಲಾ ವಲಯಗಳಿಗೆ ಆದ್ಯತೆ ಮೇಲೆ ಯೋಜನೆಗಳನ್ನು ಜಾರಿಗೊಳಿಸಲು ತೀರ್ಮಾನಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕೇಂದ್ರದ ಬಜೆಟ್ ನಂತರ ಆಯೋಜಿಸಲಾಗಿರುವ ಎಂಎಸ್ಎಂಇ ವಲಯ ಕುರಿತ ವೆಬಿನಾರ್‌ನಲ್ಲಿ ವಿಡಿಯೊ ಕಾನ್ಫರೆನ್ಸ್ ಮೂಲಕ ಭಾಗಿಯಾಗಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಕೇಂದ್ರದ ಬಜೆಟ್‌ನಲ್ಲಿ ಹಣಕಾಸು ಶಿಸ್ತಿ ಕಾಪಾಡಿಕೊಳ್ಳುವುದರ ಜೊತೆಗೆ ಪಾರದರ್ಶಕತೆಗೆ ವಿಶೇಷ ಆದ್ಯತೆ ನೀಡಲಾಗಿದೆ. ಎಲ್ಲರನ್ನೂ ಒಳಗೊಂಡ ಅಭಿವೃದ್ಧಿ ಸಾಧಿಸಲು ಕಾರ್ಯಕ್ರಮ ರೂಪಿಸಲಾಗಿದೆ ಎಂದರು. ತಯಾರಿಕೆ ಮತ್ತು ರಫ್ತು ವಲಯದಲ್ಲಿನ ಭಾಗಿದಾರರಿಗೆ ಬಜೆಟ್‌ನಲ್ಲಿ ಹೊಸ ಹೊಸ ಅವಕಾಶಗಳನ್ನು ಕಲ್ಪಿಸಲಾಗಿದೆ. ಇದಕ್ಕೆ ಪೂರಕವಾದ ಸುಸ್ಥಿರವಾದ  ನೀತಿಗಳನ್ನು ರೂಪಿಸಲಾಗಿದೆ. ಈ ಅವಕಾಶಗಳನ್ನು

ಸದುಪಯೋಗಪಡಿಸಿಕೊಂಡು ಪೂರ್ಣ ವಿಶ್ವಾಸದೊಂದಿಗೆ ದೇಶದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಪ್ರಧಾನಿ ಕರೆ ನೀಡಿದರು. ಆದಾಯ ತೆರಿಗೆ ನೀತಿಗಳನ್ನು ಸರಳೀಕರಣಗೊಳಿಸಲಾಗಿದೆ. ಜನಸ್ನೇಹಿ ವಾತಾವರಣ ನಿರ್ಮಾಣ ಮಾಡಲಾಗಿದೆ. ಜಾಗತಿಕ ರಫ್ತು ಸಂಬಂಧಿತ ಪೂರೈಕೆ ಸರಪಳಿಯನ್ನು ನಿರಂತರವಾಗಿ ಕಾಯ್ದುಕೊಂಡು ಬರಲು ಅಗತ್ಯ ಕ್ರಮ ಕೈಗೊಳ್ಳಬೇಕಾಗಿದೆ. ಗುಣಮಟ್ಟದ ಉತ್ಪನ್ನಗಳ ತಯಾರಿಕೆಗೆ ಭಾಗಿದಾರರು ಒತ್ತು ನೀಡಬೇಕಾಗಿದೆ. ಇಡೀ ಜಗತ್ತು ಭಾರತದತ್ತ ಈ ವಿಚಾರವಾಗಿ ಎದುರು ನೋಡುತ್ತಿದೆ ಎಂದರು. ಉದ್ಯಮದಾರರಿಗೆ ಸರ್ಕಾರ ಎಲ್ಲಾ ರೀತಿಯ ಬೆಂಬಲ ನೀಡಲಿದೆ. ಇದಕ್ಕಾಗಿ ಎರಡು ಅಭಿಯಾನಗಳನ್ನು ರೂಪಿಸಲಾಗಿದೆ. ತಯಾರಿಕೆ ಜೊತೆಗೆ ಸಂಶೋಧನೆ ಮತ್ತು ಅಭಿವೃದ್ಧಿಗೆ ಆದ್ಯ ಗಮನ ನೀಡಲಾಗಿದೆ. ಸಾಂಪ್ರದಾಯಿಕ ತಂತ್ರಜ್ಞಾನಗಳ ಜೊತೆಗೆ ಅತ್ಯಾಧುನಿಕ ತಂತ್ರಜ್ಞಾನ ಬಳಸಿಕೊಳ್ಳುವತ್ತ ಉದ್ಯಮಿದಾರರು ಆಸಕ್ತಿ ತೋರಬೇಕು. ಪಿಎಂ ವಿಶ್ವಕರ್ಮ ಯೋಜನೆಯಡಿ ಉದ್ಯೋಗವಕಾಶ ಸೃಷ್ಟಿಗೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದರು.

ಧ್ವನಿ: ಪ್ರಧಾನಮಂತ್ರಿ

<><><><>

ನವದೆಹಲಿಯ ಭಾರತೀಯ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣಾ ಸಂಸ್ಥೆಯಲ್ಲಿ ಇಂದಿನಿಂದ ಎರಡು ದಿನಗಳ ಕಾಲ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳ ಎರಡು ದಿನಗಳ ಸಮಾವೇಶ ನಡೆಯಲಿದೆ. ಚುನಾವಣಾ ಆಯೋಗ ಈ ಸಮಾವೇಶವನ್ನು ಏರ್ಪಡಿಸಿದೆ. ಜ್ಞಾನೇಶ್ ಕುಮಾರ್ ಅವರು ದೇಶದ ಮುಖ್ಯ ಚುನಾವಣಾ ಆಯುಕ್ತರಾಗಿ ಅಧಿಕಾರವಹಿಸಿಕೊಂಡ ನಂತರ ಈ ರೀತಿಯ ಸಮಾವೇಶ ಇದೇ ಮೊದಲ ಬಾರಿಗೆ ನಡೆಯುತ್ತಿದೆ. ಎರಡು ದಿನಗಳ ಈ ಸಮಾವೇಶ ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳ ಚುನಾವಣಾಧಿಕಾರಿಗಳು ಚುನಾವಣಾ ವ್ಯವಸ್ಥೆ ಬಗ್ಗೆ ಹೆಚ್ಚಿನ ಮಾಹಿತಿ ಮತ್ತು ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಲು ವೇದಿಕೆಯಾಗಿ ರೂಪುಗೊಳ್ಳಲಿದೆ. ಸಮಾವೇಶ ಸಂದರ್ಭದಲ್ಲಿ ಐಟಿ ಆರ್ಕಿಟೆಚ್ಚರ್, ಪರಿಣಾಮಕಾರಿ ಸಂವಹನ, ಸಾಮಾಜಿಕ ಮಾಧ್ಯಮ ನಿರ್ವಹಣೆ ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ಅಧಿಕಾರಿಗಳಿಗಿರುವ ಶಾಸನಬದ್ಧ ಅಧಿಕಾರ ಮತ್ತಿತರ ವಿಚಾರಗಳು ಚರ್ಚೆಗೆ ಬರಲಿವೆ.

<><><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ ಎಸ್ ಜೈಂಶರ್ ಇಂದಿನಿಂದ ಯುನೈಟೆಡ್ ಕಿಂಗ್ ಡಮ್ ಮತ್ತು ಐರ್‌ಲ್ಯಾಂಡ್‌ಗೆ ಪ್ರವಾಸ ಕೈಗೊಳ್ಳಲಿದ್ದಾರೆ. ಯುನೈಟೆಡ್ ಕಿಂಗ್ ಡಮ್ ಪ್ರವಾಸ ಸಂದರ್ಭದಲ್ಲಿ ಅವರು ತಮ್ಮ ಸಹವರ್ತಿ, ವಿದೇಶಾಂಗ ಕಾರ್ಯದರ್ಶಿ ಡೆವಿಡ್ ಲ್ಯಾಮಿ ಮತ್ತು ಇತರ ಹಲವು ಪ್ರಮುಖರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಭಾರತ ಮತ್ತು ಯುಕೆ ನಡುವಿನ ಸಮಗ್ರ ಕಾರ್ಯತಂತ್ರ ಪಾಲುದಾರಿಕೆ ರಕ್ಷಣೆ, ಭದ್ರತೆ, ವ್ಯಾಪಾರ, ಆರ್ಥಿಕತೆ, ಆರೋಗ್ಯ, ಶಿಕ್ಷಣ ಮತ್ತು ಜನರ ನಡುವಿನ ಸಂಬಂಧಗಳ ಬಲವೃದ್ಧಿ ಕುರಿತು ಉಭಯ ದೇಶಗಳು ಚರ್ಚೆ ನಡೆಸಲಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಮೂಲಗಳು ತಿಳಿಸಿವೆ. ಐರ್ಲೆಂಡ್‌ಗೆ ಎರಡು ದಿನಗಳ ಪ್ರವಾಸ ಸಂದರ್ಭದಲ್ಲಿ ಡಾ.ಜೈಶಂಕರ್, ಐರಿಶ್‌ನ ವಿದೇಶಾಂಗ ಸಚಿವ ಸೈಮನ್ ಹ್ಯಾರಿಸ್ ಮತ್ತು ಇತರ ಪ್ರಮುಖರನ್ನು ಭೇಟಿ ಮಾಡಿ ಚರ್ಚಿಸಲಿದ್ದಾರೆ. ಇದೇ ವೇಳೆ, ಜೈಂಶಕರ್ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ. ಪ್ರಜಾಸತ್ತಾತ್ಮಕ ಮೌಲ್ಯಗಳು, ಸಾಂಸ್ಕೃತಿಕ ಸಂಬಂದಗಳು ಮತ್ತು ಬೆಳವಣಿಗೆ ಕಾಣುತ್ತಿರುವ ಆರ್ಥಿಕ ವ್ಯವಹಾರಗಳ ಕುರಿತು ಭಾರತ ಮತ್ತು ಐರ್ಲೆಂಡ್ ದ್ವಿಪಕ್ಷೀಯ ಸಂಬಂಧಗಳ ವೃದ್ಧಿ ಕುರಿತು ಚರ್ಚೆ ನಡೆಸಲಿವೆ.

<><><><>

ದೇಶದ ಸಂಶೋಧನೆ ಮತ್ತು ಅಭಿವೃದ್ಧಿ ವಲಯದ ಅಭಿವೃದ್ಧಿಗೆ ಕಳೆದ ಒಂದು ದಶಕದಲ್ಲಿ ವೆಚ್ಚ ಮಾಡಿರುವ ಅನುದಾನ ದ್ವಿಗುಣಗೊಂಡಿದೆ. ಈ ವಲಯಕ್ಕೆ ೨೦೧೩-೧೪ರಲ್ಲಿ ೧ ಕೋಟಿ ೨೭ ಲಕ್ಷ ಕೋಟಿ ರೂಪಾಯಿ ಇದ್ದದ್ದು, ಇದೀಗ ೬೦ ಸಾವಿರ ಕೋಟಿ ರೂಪಾಯಿಗೂ ಅಧಿಕವಾಗಿದೆ ಎಂದು ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಏರ್ಪಡಿಸಿದ್ದ ದಿಶಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದಿಶಾ ಕಾರ್ಯಕ್ರಮ ದೇಶದ ಜ್ಞಾನ, ಆರ್ಥಿಕತೆಯ ವೃದ್ಧಿಗೆ ಸಹಕಾರಿಯಾಗಲಿದೆ ಮತ್ತು ಆತ್ಮನಿರ್ಭರ ಭಾರತ ಅಭಿಯಾನಕ್ಕೆ ಹೆಚ್ಚಿನ ಬಲ ನೀಡಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ತಂತ್ರಜ್ಞಾನ ಅನ್ವೇಷಣೆ ಮತ್ತು ವಾಣಿಜ್ಯೀಕರಣ ವಲಯದಲ್ಲಿ ಭಾರತ ಜಾಗತಿಕ ಭೂಪಟದಲ್ಲಿ ಮುಂಚೂಣಿ ಸ್ಥಾನದಲ್ಲಿ ನಿಲ್ಲಲಿದೆ ಎಂದು ಡಾ.ಸಿಂಗ್ ಹೇಳಿದ್ದಾರೆ. ಕೃತಕಬುದ್ಧಿಮತ್ತೆ, ಜೈವಿಕ ತಂತ್ರಜ್ಞಾನ ಮತ್ತು ಕ್ವಾಂಟಮ್ ವಲಯಗಳಲ್ಲಿನ ಅನ್ವೇಷಣೆ ದೇಶದ ಭವಿಷ್ಯದ ಆರ್ಥಿಕತೆಯನ್ನು ಬದ್ಧಪಡಿಸುವಲ್ಲಿ ತನ್ನದೇ ಕೊಡುಗೆಯನ್ನು ನೀಡಲಿದೆ ಎಂದು ಸಚಿವರು ತಿಳಿಸಿದರು.

<><><><>

ದೇಶವಾಸಿಗಳು ತಮ್ಮ ಬದುಕಿನ ಪ್ರಯಾಣದಲ್ಲಾದ ಸ್ಫೂರ್ತಿದಾಯಕ ಘಟನಾವಳಿಗಳ ಕುರಿತು ನಮೋ ಆಪ್ ಓಪನ್ ಫೋರಂನಲ್ಲಿ ಹಂಚಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ನಮೋ ಆಪ್‌ನಲ್ಲಿ ಜನರ ಸ್ಫೂರ್ತಿದಾಯಕ ಪ್ರಯಾಣ ಕುರಿತು ಅನುಭವಗಳನ್ನು ಹಂಚಿಕೊಂಡಿರುವ ಹಿನ್ನೆಲೆಯಲ್ಲಿ, ಇದೇ ೮ ರಂದು ನಡೆಯಲಿರುವ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಪ್ರಧಾನಮಂತ್ರಿ ಅವರ ಡಿಜಿಟಲ್ ಸೋಶಿಯಲ್ ಮೀಡಿಯಾ ಅಕೌಂಟ್‌ಗಳ ಮೂಲಕ ಸಾಮಾಜಿಕ ಮಾಧ್ಯಮದಲ್ಲಿ ಚರ್ಚಿಸಲು ಕೆಲವು ಮಹಿಳೆಯರಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ.

<><><><>

ಮಹಾರಾಷ್ಟ್ರ ವಿಧಾನಪರಿಷತ್ತಿನ ಐದು ಸ್ಥಾನಗಳಿಗೆ ನಡೆಯಲಿರುವ ಉಪಚುನಾವಣೆಗೆ ಚುನಾವಣಾ ಆಯೋಗ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಈ ಸ್ಥಾನಗಳನ್ನು ಪ್ರತಿನಿಧಿಸುತ್ತಿದ್ದ ಐವರು ಸದಸ್ಯರು ವಿಧಾನಸಭೆಗೆ ಆಯ್ಕೆಯಾಗಿರುವುದರಿಂದ ತೆರವಾದ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಇದೇ ೧೦ ರಂದು ಅಧಿಸೂಚನೆ ಹೊರಬೀಳಲಿದೆ. ನಾಮಪತ್ರ ಸಲ್ಲಿಸಲು ಇದೇ ೧೭ ಕೊನೆಯ ದಿನ. ಮತದಾನ ಇದೇ ೨೭ ರಂದು ನಡೆಯಲಿದ್ದು, ಅದೇ ದಿನ ಮತ ಎಣಿಕೆ ನಡೆಯಲಿದೆ.

<><><><>

ಚೀನಾ, ಕೆನಡಾ ಮತ್ತು ಮೆಕ್ಸಿಕೊದಿಂದ ಅಮೆರಿಕಾಗೆ ರಫ್ತಾಗುವ ಉತ್ಪನ್ನಗಳ ಮೇಲೆ ಹೆಚ್ಚಿನ ತೆರಿಗೆಗಳನ್ನು ವಿಧಿಸುವ ಪ್ರಕ್ರಿಯೆ ಇಂದಿನಿಂದ ಆರಂಭವಾಗಿದೆ. ಕೆನಡಾ ಮತ್ತು ಮೆಕ್ಸಿಕೊದಿಂದ ರಫ್ತಾಗುವ ಉತ್ಪನ್ನಗಳ ಮೇಲೆ ಶೇಕಡ ೨೫ ರಷ್ಟು ತೆರಿಗೆ ವಿಧಿಸುವುದಾಗಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಕಟಿಸಿದ್ದಾರೆ. ಚೀನಾದಿಂದ ರಫ್ತಾಗುವ ಉತ್ಪನ್ನಗಳ ಮೇಲೆ ತೆರಿಗೆ ಪ್ರಮಾಣವನ್ನು ದ್ವಿಗುಣಗೊಳಿಸಿದ್ದು, ಶೇಕಡ ೨೦ ರಷ್ಟು ತೆರಿಗೆ ವಿಧಿಸಲಾಗುತ್ತಿದೆ. ಈ ನಿಯಮ ಕಳೆದ ತಿಂಗಳಿನಿಂದ ಜಾರಿಯಲ್ಲಿದೆ. ಮತ್ತೊಂದೆಡೆ ಕೆನಡಾ ಅಮೆರಿಕಾದ ನೀತಿ ವಿರುದ್ಧ ಪ್ರತಿಕಾರ ತೀರಿಸಿಕೊಳ್ಳುವುದಾಗಿ ಹೇಳಿದೆ. ಅಮೆರಿಕಾದಿಂದ ರಫ್ತಾಗುವ ೧೫೦ ಶತಕೋಟಿ ಡಾಲರ್‌ಗಳ ಮೌಲ್ಯದ ವಸ್ತುಗಳ ಮೇಲೆ ಶೇಕಡ ೨೫ ರಷ್ಟು ತೆರಿಗೆ ವಿಧಿಸುವುದಾಗಿ ಕೆನಡಾ ತಿಳಿಸಿದೆ.

ಧ್ವನಿ : ಟ್ರಂಪ್

ಚೀನಾ ಕೂಡ ಅಮೆರಿಕಾದಿಂದ ರಫ್ತಾಗುವ ಕೃಷಿ ಉತ್ಪನ್ನಗಳ ಮೇಲೆ ಶೇಕಡ ೧೦ ರಿಂದ ೧೫ ರಷ್ಟು ತೆರಿಗೆ ವಿಧಿಸುವುದಾಗಿ ಘೋಷಿಸಿದೆ. ಈ ಮೂಲಕ ಅಮೆರಿಕಾದಲ್ಲಿನ ಕಂಪನಿಗಳ ವಿರುದ್ಧ

ಮುಂದಾಗಿದೆ. ಏತನ್ಮಧ್ಯೆ, ಮೆಕ್ಸಿಕೊ ಕೂಡ ಅಮೆರಿಕಾದ ನೀತಿ ವಿರುದ್ಧ ತಿರುಗಿ ಬಿದ್ದಿದೆ. ತೆರಿಗೆ ಹೆಚ್ಚಳ ಕುರಿತು ಸಮರ್ಥನೆ ಮಾಡಿಕೊಂಡಿರುವ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೆನಡಾ ಮತ್ತು ಮೆಕ್ಸಿಕೊದಿಂದ ಅಕ್ರಮವಾಗಿ ಪೂರೈಕೆಯಾಗುವ ಮಾದಕ ವಸ್ತುಗಳ ನಿಯಂತ್ರಣಕ್ಕೆ ಆಮದು ತೆರಿಗೆ ಹೆಚ್ಚಳ ಸಹಕಾರಿಯಾಗಲಿದೆ. ಅಲ್ಲದೇ ವಲಸಿಗರನ್ನು ತಡೆಯಲು ನೆರವಾಗಲಿದೆ ಎಂದು ಹೇಳಿದ್ದಾರೆ. ಈ ವಿಚಾರದಲ್ಲಿ ಯಾವುದೇ ರೀತಿಯ ವ್ಯಾಪಾರ ಸಂಧಾನ ಪ್ರಕ್ರಿಯೆಗಳಿಗೆ ಅವಕಾಶಗಳಿರುವುದಿಲ್ಲ ಎಂದು ಟ್ರಂಪ್ ಸ್ಪಷ್ಟಪಡಿಸಿದ್ದಾರೆ. ಕೆನಡಾ ಹಾಗೂ ಮೆಕ್ಸಿಕೊದಿಂದ ಅಮೆರಿಕಾಕ್ಕೆ ರಫ್ತು ಮಾಡುವ ಉತ್ಪನ್ನಗಳ ಮೇಳೆ ತೆರಿಗೆ ಹೆಚ್ಚಳ ನೀತಿ ಕಳೆದ ಒಂದು ತಿಂಗಳ ಹಿಂದೆಯೇ ಜಾರಿಗೆ ಬರಬೇಕಾಗಿತ್ತು. ಉತ್ತರ ಅಮೆರಿಕಾದ ನೆರೆ-ಹೊರೆ ದೇಶಗಳು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದರಿಂದ ಜಾರಿ ಮಾಡುವ ವಿಚಾರದಲ್ಲಿ ವಿಳಂಬವಾಗಿದೆ. ಅಮೆರಿಕಾದ ತೆರಿಗೆ ನೀತಿ ಬಗ್ಗೆ ಈಗಾಗಲೇ ಮೂರು ರಾಷ್ಟ್ರಗಳು ವಿರೋಧ ವ್ಯಕ್ತಪಡಿಸಿವೆ.

<><><>

ಒಡಿಶಾದ ಭುವನೇಶ್ವರ್ ಮೂಲದ ಕೆಐಐಟಿ ವಿಶ್ವವಿದ್ಯಾಲಯದಲ್ಲಿ ನೇಪಾಳದ ವಿದ್ಯಾರ್ಥಿ ಪ್ರಕೃತಿ ಲ್ಯಾಮ್‌ಸಾಲ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಆರೋಪ ಕುರಿತು ಖುದ್ದು ತನಿಖೆ ನಡೆಸುವಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ನಿರ್ದೇಶನ ನೀಡಿದೆ. ವಿಷಯದ ಗಂಭೀರತೆ ಅರೆತಿರುವ ಆಯೋಗ ತನಿಖಾ ಇಲಾಖೆಯ ಕಾನೂನು ವಿಭಾಗದ ರಿಜಿಸ್ಟ್ರಾರ್ ಮತ್ತು ಇತರ ಇಬ್ಬರು ಅಧಿಕಾರಿಗಳು ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ, ಖುದ್ದು ತನಿಖೆ ನಡೆಸುವಂತೆ ಸೂಚಿಸಿದೆ. ಸಮಗ್ರ ತನಿಖೆಯ ನಂತರ ಇದೇ ೧೦ ರೊಳಗೆ ವರದಿ ನೀಡುವಂತೆಯೂ ಆಯೋಗ ತನಿಖಾ ತಂಡಕ್ಕೆ ತಿಳಿಸಿದೆ. ವಿಶ್ವವಿದ್ಯಾಲಯದಲ್ಲಿ ಕಿರುಕುಳ ತಾಳಲಾರದೆ ನೇಪಾಳದ ವಿದ್ಯಾರ್ಥಿನಿಯೊಬ್ಬರು ವಿಶ್ವವಿದ್ಯಾಲಯದ ಹಿರಿಯ ಅಧಿಕಾರಿಗಳಿಗೆ ದೂರು ನೀಡಿದ್ದರು. ಇದಕ್ಕೆ ಸಕಾರಾತ್ಮಕ ಸ್ಪಂಧನೆ ದೊರೆಯದ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿ ಕಳೆದ ತಿಂಗಳ ೧೮ ರಂದು ರಾತ್ರಿ ಆತ್ಮಹತ್ಯೆ ಮಾಡಿಕೊಂಡಿದ್ದರು.

<><><>

ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿಯ ಮೊದಲ ಸೆಮಿ ಫೈನಲ್ ಪಂದ್ಯ ಇಂದು ದುಬೈನಲ್ಲಿ ನಡೆಯಲಿದ್ದು, ಭಾರತ-ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಇಂದು ಮಧ್ಯಾಹ್ನ ೨.೩೦ಕ್ಕೆ ಆರಂಭವಾಗಲಿದೆ. ತಮ್ಮ ಗುಂಪು ಮಟ್ಟದ ಪಂದ್ಯಗಳಲ್ಲಿ ಎಲ್ಲಾ ಮೂರು

ಪಂದ್ಯಗಳಲ್ಲಿ ಗೆಲುವು ಸಾಧಿಸುವ ಮೂಲಕ ಭಾರತ ಎ ಗುಂಪಿನಲ್ಲಿ ಅಗ್ರ ಸ್ಥಾನ ಪಡೆದಿದೆ. ನಾಳೆ, ೫ ರಂದು ಲಾಹೋರ್‌ನಲ್ಲಿ ನ್ಯೂಜಿಲೆಂಡ್ ತಂಡ, ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ. ಫೈನಲ್ ಪಂದ್ಯ ಇದೇ ೯ ರ ಭಾನುವಾರ ಜರುಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>